Akashvani : Bangalore
Regional Bulletin In Kannada
07.10.2024 / 14.30 hrs
ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ

ಮುಖ್ಯಾಂಶಗಳು

- ಮುಖ್ಯಮಂತ್ರಿ ಸಿದ್ದರಾಮಯ್ಯ ರಾಜೀನಾಮೆ ವಿಚಾರ ರಾಜ್ಯದಲ್ಲಿ ಬಿಕ್ಕಟ್ಟು ತಂದಿದೆ- ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ
- ಮುಡಾ ಹಗರಣದಿಂದ ಜನರ ಗಮನ ಬೇರೆಡೆಗೆ ಸೆಳೆಯಲು ಜಾತಿಗಣತಿ ವಿಷಯ ಪ್ರಸ್ತಾಪ - ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ
- ಶಿಕಾರಿಪುರ ತಾಲೂಕಿನ ಕುಟ್ರಳ್ಳಿಯ ಸುಂಕ ವಸೂಲಿ ಕೇಂದ್ರ ತೆರವುಗೊಳಿಸುವಂತೆ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಮನವಿ
- ದಸರಾ ಮಹೋತ್ಸವ ಜಂಬೂ ಸವಾರಿ ಮೆರವಣಿಗೆಯಲ್ಲಿ ನಿಶಾನೆ ಆನೆಯಾಗಿ ಧನಂಜಯ ಆನೆ ಆಯ್ಕೆ

<><*<><>*><>

ಮುಖ್ಯಮಂತ್ರಿ ಸಿದ್ದರಾಮಯ್ಯ ರಾಜೀನಾಮೆ ವಿಚಾರದಿಂದಾಗಿ ರಾಜ್ಯದಲ್ಲಿ ಬಿಕ್ಕಟ್ಟು ಉದ್ಭವಿಸಿದೆ ಎಂದು ಬಿಜೆಪಿ ಸಂಸದ ಬಸವರಾಜ ಬೊಮ್ಮಾಯಿ ಹೇಳಿದ್ದಾರೆ. ಗದಗದಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮುಖ್ಯಮಂತ್ರಿ ಸಿದ್ದರಾಮಯ್ಯ ರಾಜೀನಾಮೆ ನೀಡಿದರೆ, ಮುಂದೆ ಕಾಂಗ್ರೆಸ್ ಸರ್ಕಾರ ಬರುವುದಿಲ್ಲ. ಹೀಗಾಗಿ ಸರ್ಕಾರ ಉಳಿಸಿಕೊಳ್ಳಲು ನಿರಂತರ ಪ್ರಯತ್ನ ಮಾಡುತ್ತಿದ್ದಾರೆ ಎಂದರು. ಮುಖ್ಯಮಂತ್ರಿ ಬದಲಾವಣೆಗಾಗಿ ಕಾಂಗ್ರೆಸ್ ಪಕ್ಷದಲ್ಲಿ ಬಹಳಷ್ಟು ಚಟುವಟಿಕೆ ನಡೆಯುತ್ತಿದೆ. ವಿಶೇಷವಾಗಿ ಹಿರಿಯ ಸಚಿವರು ದೆಹಲಿ ಭೇಟಿ ಮಾಡುತ್ತಿರುವುದು ನೋಡಿದರೆ, ವಿರೋಧಪಕ್ಷಕ್ಕಿಂತ ಆಡಳಿತ ಪಕ್ಷದವರೆ ಮುಖ್ಯಮಂತ್ರಿ ಬದಲಾವಣೆಗೆ ಅವಸರ ಮಾಡುತ್ತಿದ್ದಾರೆ. ರಾಜ್ಯದಲ್ಲಿ ಆಡಳಿತ ಸ್ಥಗಿತವಾಗಿದೆ. ಯಾವುದೇ ಅಭಿವೃದ್ಧಿಗೆ ಹಣ ಬಿಡುಗಡೆಯಾಗುತ್ತಿಲ್ಲ. ರಾಜ್ಯಕ್ಕೆ ಸಾಕಷ್ಟು ಹಿನ್ನಡೆಯಾಗುತ್ತದೆ ಎಂದು ಟೀಕಿಸಿದರು.

<><*<><>*><>

ಮುಡಾ ಹಗರಣದಿಂದ ಜನರ ಗಮನವನ್ನು ಬೇರೆಡೆಗೆ ಸೆಳೆಯಲು ಜಾತಿಗಣತಿ ವಿಷಯವನ್ನು ಮುನ್ನೆಲೆಗೆ ತಂದು ದಿಕ್ಕುತಪ್ಪಿಸಲಾಗುತ್ತಿದೆ ಎಂದು ಕೇಂದ್ರ ಭಾರೀ ಕೈಗಾರಿಕೆ ಹಾಗೂ ಉಕ್ಕು ಖಾತೆ ಸಚಿವ ಎಚ್.ಡಿ.ಕುಮಾರ್‌ಸ್ವಾಮಿ ದೂರಿದ್ದಾರೆ. ತಮ್ಮ ಬೆಂಗಳೂರಿನ ನಿವಾಸದಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸರ್ಕಾರದ ವಿರುದ್ಧ ಆರೋಪಗಳು ಕೇಳಿಬಂದಾಗಲೆಲ್ಲಾ ಜನರ ಗಮನ ಬೇರೆಡೆಗೆ ಹೊರಳಿಸಲು ತಂತ್ರಗಾರಿಕೆ ಮಾಡಲಾಗುತ್ತಿದೆ. ಈಗ ಮುಡಾ ಹಗಣರದ ವಿಷಯವನ್ನು ಬೇರೆಡೆಗೆ ಸೆಳೆಯಲು ಜಾತಿಗಣತಿ ವಿಚಾರವನ್ನು ಮುಂದಕ್ಕೆ ತಂದಿದೆ ಎಂದು ಆರೋಪಿಸಿದರು. ಕಾಂತರಾಜ ಆಯೋಗವನ್ನು ರಚನೆ ಮಾಡಿ ಹತ್ತು ವರ್ಷಗಳು ಕಳೆದಿವೆ.. ಈಗ ಈ ಹತ್ತು ವರ್ಷಗಳಲ್ಲಿ ಅನೇಕ ಬೆಳವಣಿಗೆಗಳು ಆಗಿವೆ. ಈ ಹಿಂದೆ ಮಾಡಿರುವ ಜಾತಿಗಣತಿ ವರದಿಯಿಂದ

ಯಾವುದೇ ಸಮುದಾಯಕ್ಕೆ ಅನುಕೂಲವಾಗುವುದಿಲ್ಲ. ಮುಡಾ ಹಗಣರವನ್ನು ಮರೆಮಾಚಲು ಈಗ ಜಾತಿಗಣತಿ ವಿಷಯವನ್ನು ಮುನ್ನೆಲೆಗೆ ತಂದಿದ್ದಾರೆ ದೂರಿದರು.

ಧ್ವನಿ: ಎಚ್.ಡಿ.ಕುಮಾರಸ್ವಾಮಿ, ಕೇಂದ್ರ ಸಚಿವ

<><*<><>*><>

ಶಿವಮೊಗ್ಗ-ಶಿಕಾರಿಪುರ-ಹಾನಗಲ್-ತಡಸ ರಸ್ತೆಯ ಶಿಕಾರಿಪುರ ತಾಲೂಕಿನ ಕುಟ್ರಹಳ್ಳಿಯಲ್ಲಿ ನಿರ್ಮಿಸಿರುವ ಸುಂಕ ವಸೂಲಿ ಕೇಂದ್ರವನ್ನು ತೆರವುಗೊಳಿಸುವಂತೆ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಅವರಿಂದು, ಲೋಕೋಪಯೋಗಿ ಇಲಾಖೆ ಸಚಿವ ಸತೀಶ್ ಜಾರಕಿಹೊಳಿಯವರಿಗೆ ಮನವಿ ಸಲ್ಲಿಸಿದರು. ಶಿಕಾರಿಪುರ ರಾಜ್ಯ ಹೆದ್ದಾರಿಯಲ್ಲಿ ೨ ಟೋಲ್ ಇವೆ. ಶಿಕಾರಿಪುರ ತಾಲ್ಲೂಕಿನ ಸುಂಕು ವಸೂಲಿ ಕೇಂದ್ರದಿಂದ ರೈತರು, ಬಡವರಿಗೆ ಅನಾನುಕೂಲ ಆಗಿದೆ. ಮೂರು ಜಿಲ್ಲೆಗಳ ಜನರು ಈ ಹೆದ್ದಾರಿ ಉಪಯೋಗಿಸುತ್ತಿದ್ದು, ಒಂದೇ ಜಿಲ್ಲೆಯಲ್ಲಿ ೨ ಟೋಲ್ ಇವೆ. ಟೋಲ್ ವರ್ಗಾಯಿಸಿ ಬಡವರಿಗೆ ಪ್ರಯೋಜನ ದೊರಕಿಸಿಕೊಡಲು ಕೋರಿದ್ದಾರೆ. ಟೋಲ್ ವರ್ಗಾವಣೆಗೆ ೨ ಮೂರು ಬಾರಿ ಹೋರಾಟ ನಡೆದಿದೆ. ಸಚಿವ ಜಾರಿಕಿಹೊಳಿ ಅವರು ಸಕಾರಾತ್ಮಕವಾಗಿ ಸ್ಪಂದಿಸಿದ್ದಾರೆ. ಈ ವಿಚಾರದಲ್ಲಿ ಚರ್ಚಿಸಲು ಶೀಘ್ರವೇ ಅಧಿಕಾರಿಗಳ ಸಭೆ ಕರೆಯುವುದಾಗಿ ತಿಳಿಸಿದ್ದಾರೆ.

<><*<><>*><>

ಹುಟ್ಟಿನಿಂದಲೂ ನಾವು ಕನ್ನಡಿಗರಾಗಿದ್ದು, ನಮ್ಮ ಉಸಿರು ಇರುವವರೆಗೂ ಕನ್ನಡ ಭಾಷೆಯನ್ನು ಉಳಿಸಿ, ಬೆಳೆಸುವ ಕೆಲಸವಾಗಬೇಕು ಎಂದು ಬಾಗಲಕೋಟೆ ಜಿಲ್ಲಾಧಿಕಾರಿ ಜಾನಕಿ ಕೆ.ಎಂ ಹೇಳಿದರು. ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನದ ಅಂಗವಾಗಿ ಬಾಗಲಕೋಟೆ ಜಿಲ್ಲೆಗೆ ಆಗಮಿಸಿರುವ ಕನ್ನಡ ಜ್ಯೋತಿ ರಥಯಾತ್ರೆ ಸೋಮವಾರ ಜಿಲ್ಲಾಡಳಿತಕ್ಕೆ ಆಗಮಿಸಿದ ಹಿನ್ನಲೆಯಲ್ಲಿ ಅದ್ದೂರಿಯಾಗಿ ಸ್ವಾಗತಿಸುವ ಮೂಲಕ ಕನ್ನಡ ಜ್ಯೋತಿಯನ್ನು ಬೆಳಗಿಸಿ ಮಾತನಾಡಿದ ಅವರು ಕನ್ನಡ ನಮಗೆಲ್ಲ ಕೊಟ್ಟಿದೆ. ನಾವು ಏನು ಕೊಟ್ಟಿದ್ದೇವೆ ಎಂದು ಕನ್ನಡಿಗರು ಅರ್ಥ ಮಾಡಿಕೊಂಡು ಕನ್ನಡ ಭಾಷೆ, ಸಾಹಿತ್ಯ, ಸಂಸ್ಕೃತಿ, ಪರಂಪರೆ ಬೆಳವಣಿಗೆಗೆ ಎಲ್ಲರೂ ಕೈಜೋಡಿಸುವ ಕಾರ್ಯವಾಗಬೇಕು ಎಂದರು. ಕನ್ನಡ ಭಾಷೆಯ ಸೊಗಡು, ಸೊಬಗು ನಮ್ಮ ಜೊತೆಯಲ್ಲಿ ಇರಬೇಕು. ಕನ್ನಡ ಸಾಹಿತ್ಯ ಸಮ್ಮೇಳದಲ್ಲಿ ಎಲ್ಲರೂ ಪಾಲ್ಗೊಂಡು ಕನ್ನಡದ ಕಂಪನ್ನು ಬೀರುವ ಕೆಲಸವಾಗಬೇಕು. ಈ ಕನ್ನಡ ಜ್ಯೋತಿ ರಥಯಾತ್ರೆ ಸಂಚಾರದಲ್ಲಿ ಸಂಭ್ರಮದಿಂದ ಸ್ವಾಗತಿಸುವ ಕಾರ್ಯ ನಡೆಯಲಿ ಎಂದರು. ಜಿ.ಪಂ ಸಿಇಓ ಶಶಿಧರ ಕುರೇರ ಮಾತನಾಡಿ ಪ್ರತಿಯೊಬ್ಬರೂ ನಮ್ಮ ಸಂಸ್ಕೃತಿ, ಕನ್ನಡ ನಾಡು-ನುಡಿಯನ್ನು ಸಂರಕ್ಷಿಸುವ ನಿಟ್ಟಿನಲ್ಲಿ ಕೆಲಸ ಮಾಡಬೇಕು. ಕನ್ನಡ ಭಾಷೆಯನ್ನು ಉನ್ನತ ಸ್ಥಾನದಲ್ಲಿ ತಂದು ಅದರ ಉಳಿವಿಗಾಗಿ, ಏಳಿಗೆಗಾಗಿ ಶ್ರಮಿಸುವ ಕೆಲಸವಾಗಬೇಕು ಎಂದು ತಿಳಿಸಿದರು.

<><*<><>*><>

ಕೊಡಗು ಜಿಲ್ಲೆಯಲ್ಲಿ ಕೃಷಿ, ಕಾಫಿ ಮುಖ್ಯ ಬೆಳೆಯಾಗಿದ್ದು, ಕಾಫಿ ಜತೆಗೆ ಕೃಷಿ ಮತ್ತು ತೋಟಗಾರಿಕೆಯ ಸಮಗ್ರ ಅಭಿವೃದ್ಧಿಗೆ ಎಲ್ಲಾ ರೀತಿಯ ಅಗತ್ಯ ಸಹಕಾರ ನೀಡಲಾಗುವುದು ಎಂದು ಕೃಷಿ ಸಚಿವರಾದ ಎನ್. ಚಲುವರಾಯಸ್ವಾಮಿ ಅವರು ತಿಳಿಸಿದ್ದಾರೆ. ಮಡಿಕೇರಿ ನಗರ ದಸರಾ ಸಮಿತಿ ವತಿಯಿಂದ ವಿವಿಧ ಇಲಾಖೆಗಳ ಸಹಕಾರದಲ್ಲಿ ಕಾಫಿ ಹಾಗೂ ಕೃಷಿ ಸಂಬಂಧಿತ ಮಾಹಿತಿಯುಳ್ಳ ಎರಡು ದಿನಗಳ ವಸ್ತು ಪ್ರದರ್ಶನ ಮಳಿಗೆ ವೀಕ್ಷಣೆ ಹಾಗೂ ಮೊದಲ ವರ್ಷದ ಕಾಫಿ ದಸರಾಗೆ ಭಾನುವಾರ

ಚಾಲನೆ ನೀಡಿ ಸಚಿವರು ಮಾತನಾಡಿದರು. ಕಾಫಿ ಬೆಳೆಗಾರರಿಗೆ ಯಾವುದೇ ರೀತಿ ತೊಂದರೆ ಆಗದಂತೆ ಗಮನ ಹರಿಸಲಾಗುವುದು, ಪ್ರಸಕ್ತ ವರ್ಷ ಭತ್ತ ಬೆಳೆಗೆ ಸಹಾಯಧನ ಕಲ್ಪಿಸಬೇಕು ಎಂಬುದು ಸರ್ಕಾರದ ಉದ್ದೇಶವಾಗಿದೆ ಎಂದು ಎನ್.ಚಲುವರಾಯಸ್ವಾಮಿ ಅವರು ವಿವರಿಸಿದರು.

<><*<><>*><>

ವಿಶ್ವ ವಿಖ್ಯಾತ ಮೈಸೂರು ದಸರಾ ಮಹೋತ್ಸವ ಜಂಬೂ ಸವಾರಿ ಮೆರವಣಿಗೆಯಲ್ಲಿ ನಿಶಾನೆ ಆನೆಯಾಗಿ ಈ ಬಾರಿ ಧನಂಜಯ ಆನೆ ಹಾಗೂ ನೌಪತ್ ಆನೆಯಾಗಿ ಗೋಪಿ ಆನೆಯನ್ನು ಆಯ್ಕೆ ಮಾಡಲಾಗಿದೆ ಎಂದು ಹಿರಿಯ ಅರಣ್ಯಧಿಕಾರಿ ಡಾ ಐ. ಬಿ.ಪ್ರಭುಗೌಡ ಮಾಹಿತಿ ನೀಡಿದ್ದಾರೆ. ಇಂದು ಮೈಸೂರಿನ ಧನ್ವಂತರಿ ರಸ್ತೆಯಲ್ಲಿರುವ ಸಾಯಿರಾಂ ಅಂಡ್ ಕೊ ಎಲೆಕ್ಟ್ರಾನಿಕ್ ತೂಕ ಮಾಪನ ಕೇಂದ್ರದಲ್ಲಿ ಚಿನ್ನದ ಅಂಬಾರಿ ಹೊರುವ ಅಭಿಮನ್ಯು ನೇತೃತ್ವದ ೧೪ ಆನೆಗಳಿಗೆ ತೂಕ ಪರೀಕ್ಷೆ ಮಾಡಲಾಯಿತು. ಅಭಿಮನ್ಯು ತಂಡದ ಆನೆಗಳು ತೂಕ ಪರೀಕ್ಷೆಯಲ್ಲಿ. ಅಭಿಮನ್ಯು, ಭೀಮ, ಏಕಲವ್ಯ, ಲಕ್ಷ್ಮಿ, ವರಲಕ್ಷ್ಮಿ, ಕಂಜನ್, ಹಿರಣ್ಯ, ಗೋಪಿ, ಪ್ರಶಾಂತ, ಮಹೇಂದ್ರ, ದೊಡ್ಡಹರವೆ ಲಕ್ಷ್ಮಿ ಸೇರಿದಂತೆ ಹದಿನಾಲ್ಕು ಆನೆಗಳು ತೂಕ ಪರಿಶೀಲನೆಯನ್ನು ಯಶಸ್ವಿಯಾಗಿ ನಡೆಸಲಾಗಿದೆ. ಗಜಪಡೆಗೆ ಅಂತಿಮ ಸುತ್ತಿನ ತೂಕ ಪರೀಕ್ಷೆ ನಡೆಸಿ ಬಳಿಕ ಮಾಧ್ಯಮಗಳೊಂದಿಗೆ ಹಿರಿಯ ಅರಣ್ಯಧಿಕಾರಿ ಡಾ ಐ ಬಿ ಪ್ರಭುಗೌಡ ಮಾತನಾಡಿ, ಕಳೆದ ಬಾರಿ ದಸರಾ ಜಂಬೂಸವಾರಿ ಮೆರವಣಿಗೆಯಲ್ಲಿ ನಿಶಾನೆ ಆನೆಯಾಗಿ ಅರ್ಜುನ ಹೆಜ್ಜೆ ಹಾಕಿದ್ದನು. ಈ ಬಾರಿ ಅರ್ಜುನನ ಸ್ಥಾನಕ್ಕೆ ಧನಂಜಯ ಆನೆಯನ್ನು ಆಯ್ಕೆ ಮಾಡಲಾಗಿದೆ. ಈ ಬಾರಿಯ ಜಂಬು ಸವಾರಿಗೆ ಎಲ್ಲ ಆನೆಗಳು ಸಿದ್ದಗೊಂಡಿವೆ ಎಂದು ಅವರು ತಿಳಿಸಿದರು.

<><*<><>*><>

ಎಪ್ಪತ್ತನೇ ವನ್ಯಜೀವಿ ಸಪ್ತಾಹದ ಅಂಗವಾಗಿ ದಾವಣಗೆರೆ ಪ್ರಾದೇಶಿಕ ಅರಣ್ಯ ವಿಭಾಗದಿಂದ ಜಗಳೂರಿನಲ್ಲಿಂದು ಜಾಗೃತಿ ಜಾಥಾ ಹಮ್ಮಿಕೊಳ್ಳಲಾಗಿತ್ತು. ಜಗಳೂರು ಪಟ್ಟಣದ ದೊಡ್ಡಮಾರಿಕಾಂಬ ದೇವಸ್ಥಾನದ ಬಳಿಯಿಂದ ಹಮ್ಮಿಕೊಂಡಿದ್ದ ಜಾಥಕ್ಕೆ ಪ್ರಾದೇಶಿಕ ಅರಣ್ಯ ವಿಭಾಗದ ಉಪ ಅರಣ್ಯ ಸಂರಕ್ಷಣಾಧಿಕಾರಿ ಶಶಿಧರ್ ಚಾಲನೆ ನೀಡಿದರು. ಜಗಳೂರು ತಾಲೂಕಿನ ರಂಗಯ್ಯನದುರ್ಗ ಕೊಂಡುಕುರಿ ವನ್ಯಜೀವಿ ವಲಯ ವ್ಯಾಪ್ತಿಯಲ್ಲಿ ಈ ಬಾರಿ ಸಪ್ತಾಹ ಹಮ್ಮಿಕೊಳ್ಳಲಾಗಿದ್ದು, 'ಸಹಬಾಳ್ವೆಯೊಂದಿಗೆ ವನ್ಯಜೀವಿ ಸಂರಕ್ಷಣೆ' ಈ ವರ್ಷದ ಘೋಷವಾಕ್ಯವಾಗಿದೆ ಎಂದು ಶಶಿಧರ್ ಹೇಳಿದರು.

<><*<><>*><>

ಕೋಲಾರ ಜಿಲ್ಲೆಯ ಎಸ್.ಎಸ್.ಎಲ್.ಸಿ ಫಲಿತಾಂಶ ಉತ್ತಮಪಡಿಸಲು ಶಾಲಾ ಶಿಕ್ಷಣ ಇಲಾಖೆ ಎಲ್ಲಾ ಅಗತ್ಯ ನೆರವು ಸಹಕಾರ ನೀಡಲಿದೆ. ಕಲಿಕೆಯಲ್ಲಿ ಹಿಂದುಳಿದ ಮಕ್ಕಳ ಬಗ್ಗೆ ಗಮನಹರಿಸುವಲ್ಲಿ ವಿಫಲರಾಗುವ ಶಾಲೆಗಳ ಮುಖ್ಯಶಿಕ್ಷಕರ ವಿರುದ್ಧ ಶಿಸ್ತುಕ್ರಮ ಕೈಗೊಳ್ಳಲಾಗುವುದು ಎಂದು ಶಾಲಾ ಶಿಕ್ಷಣ ಇಲಾಖೆ ಕೋಲಾರದ ಉಪನಿರ್ದೇಶಕ ಕೃಷ್ಣಮೂರ್ತಿ ಎಚ್ಚರಿಸಿದರು. ಕೋಲಾರ ನಗರದ ಜಿಲ್ಲಾ ಸ್ಕೌಟ್ಸ್ ಭವನದಲ್ಲಿ ತಾಲ್ಲೂಕಿನ ಸರ್ಕಾರಿ, ಅನುದಾನಿತ, ಅನುದಾನರಹಿತ ಪ್ರೌಢಶಾಲೆಗಳ ಮುಖ್ಯಶಿಕ್ಷಕರ ಸಭೆಯಲ್ಲಿ ಮಾತನಾಡಿದ ಅವರು, ಗುಣಾತ್ಮಕ ಫಲಿತಾಂಶ ಇಂದಿನ ಅಗತ್ಯವಾಗಿದೆ. ಯಾವುದೇ ಮಗು ಅನುತ್ತೀರ್ಣವಾಗಬಾರದು ಎಂಬುದು ಸರ್ಕಾರದ ಆಶಯವಾಗಿದೆ. ಈ ಹಿನ್ನಲೆಯಲ್ಲಿ ಶಾಲೆಯಲ್ಲಿ ಶಿಕ್ಷಕರು ಬದ್ಧತೆಯಿಂದ ಕೆಲಸ ಮಾಡಬೇಕು.

ಮುಖ್ಯಶಿಕ್ಷಕರು ಸಹಶಿಕ್ಷಕರ ಸಹಕಾರದೊಂದಿಗೆ ಮಕ್ಕಳಲ್ಲಿ ಕಲಿಕಾಸಕ್ತಿ ಹೆಚ್ಚಿಸಲು ಅಗತ್ಯ ಕ್ರಮ ವಹಿಸಬೇಕು ಎಂದರು. ಪ್ರತಿ ಶಾಲೆಯಲ್ಲಿ ನಿತ್ಯ ಬೆಳಗ್ಗೆ ೯ ರಿಂದ ೧೦ ರವರೆಗೂ ವಿಶೇಷ ತರಗತಿ ನಡೆಸುವುದು ಕಡ್ಡಾಯವಾಗಿದೆ. ಮುಖ್ಯಶಿಕ್ಷಕರು ಈ ಬಗ್ಗೆ ಅಗತ್ಯ ಕ್ರಮ ಕೈಗೊಳ್ಳಬೇಕು. ಮಕ್ಕಳ ಶೈಕ್ಷಣಿಕ ಅಭಿವೃದ್ಧಿಗೆ ತಂಡದೋಪಾದಿಯಲ್ಲಿ ಕೆಲಸ ನಿರ್ವಹಿಸಬೇಕು ಎಂದರು.

<><*<><>*><>

೬೮ ನೇ ಧಮ್ಮ ಪ್ರವರ್ತನಾ ದಿನಾಚರಣೆ ಅಂಗವಾಗಿ ಚಿಕ್ಕಬಳ್ಳಾಪುರ ಜಿಲ್ಲೆಯ ಪ್ರಗತಿಪರ ಹಾಗೂ ಸಮಾನತೆ ಸಾರುವ ಸಂಘಟನೆಗಳ ಒಕ್ಕೂಟ ಅಕ್ಟೋಬರ್ ೧೪ ರಂದು ಬೆಳಗ್ಗೆ ೭ ಗಂಟೆಯಿಂದ ೮.೩೦ ರವರೆಗೆ ಚಿಕ್ಕಬಳ್ಳಾಪುರ ಜಿಲ್ಲಾ ಕೇಂದ್ರದಲ್ಲಿ ಬೈಕ್ ರ್ಯಾಲಿಯನ್ನು ಹಮ್ಮಿಕೊಂಡಿದೆ. ಸಂವಿಧಾನ ಶಿಲ್ಪಿ ಭಾರತರತ್ನ ಡಾ.ಬಿ.ಆರ್.ಅಂಬೇಡ್ಕರ್ ಅವರು ೧೯೫೬ ರ ಅಕ್ಟೋಬರ್ ೦೬ ರಂದು ತಮ್ಮ ಸಾವಿರಾರು ಅನುಯಾಯಿಗಳು, ಬೆಂಬಲಿಗರೊಂದಿಗೆ ನಾಗಪುರದ ದೀಕ್ಷಾ ಭೂಮಿಯಲ್ಲಿ ಬೌದ್ಧ ಧರ್ಮವನ್ನು ಸ್ವೀಕರಿಸಿದ ದಿನವನ್ನು ಭಾರತದಲ್ಲಿ ಬೌದ್ಧ ಧರ್ಮೀಯರು, ಅಂಬೇಡ್ಕರ್ ಅನುಯಾಯಿಗಳು ಧಮ್ಮ ಚಕ್ರ ಪ್ರವರ್ತನಾ ದಿನವನ್ನಾಗಿ ಆಚರಿಸುತ್ತಾ ಬಂದಿದ್ದು, ಈ ವರ್ಷದ ಅಕ್ಟೋಬರ್ ೧೪ ರ ದಿನ ೬೮ನೇ ವರ್ಷದ ಆಚರಣೆಯಾಗಿದೆ.

<><*<><>*><>

ಕೆನರಾ ಬ್ಯಾಂಕ್ ಹಾಗೂ ಧರ್ಮಸ್ಥಳ ಮಂಜುನಾಥೇಶ್ವರ ಶಿಕ್ಷಣ ಟ್ರಸ್ಟ್ ಸಹಯೋಗದಲ್ಲಿ ನಡೆಸುತ್ತಿರುವ ರುಡ್‌ಸೆಟ್ ಸಂಸ್ಥೆಯ ವತಿಯಿಂದ ಕಸೂತಿ, ಫ್ಯಾಬ್ರಿಕ್ ಪೇಂಟಿಂಗ್ ಕುರಿತ ೩೦ ದಿನಗಳ ಉಚಿತ ತರಬೇತಿಯು ನವೆಂಬರ್ ೦೫ ರಿಂದ ಆರಂಭವಾಗಲಿದ್ದು, ಗ್ರಾಮೀಣ ಆಸಕ್ತ ನಿರುದ್ಯೋಗಿ ಯುವತಿಯರಿಂದ ಅರ್ಜಿ ಆಹ್ವಾನಿಸಲಾಗಿದೆ. ಗ್ರಾಮೀಣ ಪ್ರದೇಶದ ಅಭ್ಯರ್ಥಿಗಳಿಗೆ ಆದ್ಯತೆ ನೀಡಲಾಗುವುದು ಎಂದು ಪ್ರಕಟಣೆ ತಿಳಿಸಿದೆ.

<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>

<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ಸಂಜೆ ೬.೪೦ ಕ್ಕೆ <>*><>